ಪುತ್ತೂರು ತಾಲ್ಲೂಕಿನಲ್ಲಿ ಹೆಚ್ಚುವರಿ ಕೈಗಾರಿಕಾ ಎಸ್ಟೇಟಿನ ಸ್ಥಾಪನೆ

359 - ಶ್ರೀ ಡಿ.ವಿ. ಸದಾನಂದಗೌಡ (ಪುತ್ತೂರು) : ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಪುತ್ತೂರು ತಾಲ್ಲೂಕಿನಲ್ಲಿ ಹೆಚ್ಚುವರಿ ಇಂಡಸ್ಟ್ರಿಯಲ್ ಎಸ್ಟೇಟ್ ಸ್ಥಾಪಿಸುವ ಯೋಜನೆ ಸರ್ಕಾರಕ್ಕೆ ಇದೆಯೇ? ಇದ್ದಲ್ಲಿ ಈ ಬಗ್ಗೆ ಸ್ಥಳ ಪರಿಶೀಲನೆ ನಡೆದಿದೆಯೆ?*

ಆ) *ಪ್ರಸ್ತುತ ಪುತ್ತೂರಿನಲ್ಲಿರುವ ಇಂಡಸ್ಟ್ರಿಯಲ್ ಎಸ್ಟೇಟಿನಲ್ಲಿ ಎಷ್ಟು ಮಂದಿಗೆ ಅವಕಾಶ ಒದಗಿಸಲಾಗಿದೆ. ಎಷ್ಟು ಮಂದಿ ಇನ್ನೂ ಕೂಡ ಕಾರ್ಯಪ್ರವೃತ್ತರಾಗಿರುವುದಿಲ್ಲ?*

ಇ) *ಈ ಬಗ್ಗೆ ಸರ್ಕಾರವು ಏನು ಕ್ರಮ ಕೈಗೊಂಡಿದೆ?*

ಶ್ರೀ ಬಿ.ಎ. ಮೊಹಿದ್ದೀನ್ (ಸಣ್ಣ ಕೈಗಾರಿಕಾ ಸಚಿವರು) :

ಅ) ಪ್ರಸ್ತುತ ಪುತ್ತೂರು ತಾಲ್ಲೂಕಿನಲ್ಲಿ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ ಕೈಗಾರಿಕಾ ವಸಾಹತು ಸ್ಥಾಪಿಸಲಾಗಿರುವುದಿಲ್ಲ. ಕೈಗಾರಿಕಾ ವಸಾಹತು ಸ್ಥಾಪನೆಯ ಉದ್ದೇಶಕ್ಕಾಗಿ ಸ್ಥಳ ಪರಿಶೀಲನೆಯ ಪ್ರಕ್ರಿಯೆ ಪ್ರಾರಂಭವಾಗಿದೆ.

ಆ) ಕೈಗಾರಿಕಾ ವಸಾಹತು ಸ್ಥಾಪಿತವಾಗಿಲ್ಲದಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) 'ಅ' ರಲ್ಲಿ ತಿಳಿಸಿರುವಂತೆ.

ಖಾಸಗಿ ವಲಯದಲ್ಲಿ ಬಳ್ಳಾರಿಯ ವಿಮಾನ ನಿಲ್ದಾಣದ ನಿರ್ಮಾಣ

360 - ಶ್ರೀ ಅಲ್ಲಂ ವೀರಭದ್ರಪ್ಪ (ಕುರುಗೋಡು) : ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಂಪನ್ಮೂಲಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬಳ್ಳಾರಿ ವಿಮಾನ ನಿಲ್ದಾಣವನ್ನು ಖಾಸಗಿ ವಲಯದಲ್ಲಿ ನಿರ್ಮಿಸಲು ಸರ್ಕಾರವು ನಿರ್ಧರಿಸಿದೆಯೇ?*

ಆ) *ಹಾಗಿದ್ದಲ್ಲಿ ಈ ವಿಮಾನ ನಿಲ್ದಾಣವನ್ನು ನಿರ್ಮಿಸಲು ಮುಂದೆ ಬಂದಿರುವ ಖಾಸಗಿ ಪಾರ್ಟಿ : ಸಂಸ್ಥೆಯ ವಿವರಗಳನ್ನು ನೀಡುವುದು?*

ಇ) *ಕೇಂದ್ರದಿಂದ ಅನುಮತಿ ದೊರೆತಿದೆಯೆ?*

ಶ್ರೀ ಆರ್. ವಿ. ದೇಶಪಾಂಡೆ (ಭಾರಿ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಂಪನ್ಮೂಲಗಳ ಅಭಿವೃದ್ಧಿ ಸಚಿವರು) :

ಅ) ಹೌದು.

ಆ) ಈವರೆಗೆ ಯಾವುದೇ ಖಾಸಗಿ ಪಾರ್ಟಿ: ಸಂಸ್ಥೆಯು ಈ ವಿಮಾನ ನಿಲ್ದಾಣವನ್ನು ನಿರ್ಮಿಸಲು ಮುಂದೆ ಬಂದಿಲ್ಲ.